# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 1845 |
| ಮಾನ್ಯ ಸದಸ್ಯರ ಹೆಸರು: | ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 23.03.2026 |
| ಉತ್ತರಿಸುವ ಸಚಿವರು: | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

********

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ 70 ವರ್ಷ ಮೇಲ್ಪಟ್ಟ ವಯೋಮಾನದವರಿಗೆ ಕೇಂದ್ರ ಸರ್ಕಾರದ ಆರೋಗ್ಯ ವಿಮಾ ಯೋಜನೆಯಾದ ಆಯುಷ್ಮಾನ್ ಭಾರತ ಪ್ರಧಾನಮಂತ್ರಿ ಜನ ಆರೋಗ್ಯ ಯೋಜನೆಯಡಿ ಪ್ರತಿ ಕುಟುಂಬಕ್ಕೆ ವಾರ್ಷಿಕವಾಗಿ ರೂ.5 ಲಕ್ಷದವರೆಗೆ ನಗದು ರಹಿತ ಆರೋಗ್ಯ ವಿಮಾ ಸೌಲಭ್ಯ ಕಲ್ಪಿಸುವ ವ್ಯವಸ್ಥೆ ಇದ್ದು, ಇದನ್ನು ರಾಜ್ಯದಲ್ಲಿ ಅಳವಡಿಸುವ ಕುರಿತು ಸರ್ಕಾರದ ನಿರ್ಧಾರವೇನು; | ರಾಜ್ಯದಲ್ಲಿ 70 ವರ್ಷ ಮೇಲ್ಪಟ್ಟ ವಯೋಮಾನದವರಿಗೆ ಕೇಂದ್ರ ಸರ್ಕಾರದ ಆರೋಗ್ಯ ವಿಮಾ ಯೋ ಜನೆಯಾದ ಆಯುಷ್ಮಾನ್ ಭಾರತ ಪ್ರಧಾನಮಂತ್ರಿ ಜನ ಆರೋಗ್ಯ ಯೋಜನೆಯಡಿ ಪ್ರತಿ ಕುಟುಂಬಕ್ಕೆ ವಾರ್ಷಿಕವಾಗಿ ರೂ.5.00 ಲಕ್ಷದವರೆಗೆ ನಗದು ರಹಿತ ಆರೋಗ್ಯ ವಿಮಾ ಸೌಲಭ್ಯ ಕಲ್ಪಿಸುವ ಸಲುವಾಗಿ ಆಯುಷ್ಮಾನ್ ಭಾರತ್ ಪ್ರಧಾನ ಮಂತ್ರಿ ಜನ ಆರೋಗ್ಯ ಯೋಜನೆ ಮುಖ್ಯಮಂತ್ರಿಗಳ ಆರೋಗ್ಯ ಕರ್ನಾಟಕ ಯೋಜನೆಯಡಿ ಪ್ರತ್ಯೇಕವಾಗಿ ಹಿರಿಯ ನಾಗರಿಕರ ಯೋಜನೆಯು ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಆಯುಷ್ಮಾನ್ ಭಾರತ್ ಪ್ರಧಾನ ಮಂತ್ರಿ ಜನ ಆರೋಗ್ಯ ಯೋಜನೆ ಮುಖ್ಯಮಂತ್ರಿಗಳ ಆರೋಗ್ಯ ಕರ್ನಾಟಕ ಯೋಜನೆಯಡಿ ನೊಂದಾವಣೆಯಾಗಿರುವ ಆಸ್ಪತ್ರೆಗಳಲ್ಲಿ 70 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನ ಹಿರಿಯ ನಾಗರಿಕರು ಈ ಕೆಳಗಿನಂತೆ ವೈದ್ಯಕೀಯ ಚಿಕಿತ್ಸೆ/ಶಸ್ತ್ರ ಚಿಕಿತ್ಸೆ ಪಡೆಯಬಹುದಾಗಿದೆ. |
| ಆ) | ಕೇಂದ್ರ ಸರ್ಕಾರದ ಆಯುಷ್ಮಾನ್ ಭಾರತ ಯೋಜನೆಯಡಿ ಹಿರಿಯ ನಾಗರಿಕರಿಗೆ ಪ್ರತ್ಯೇಕವಾಗಿ ನೀಡಲಾಗುವ ಸೌಲಭ್ಯಗಳನ್ನು ರಾಜ್ಯ ಸರ್ಕಾರವು ಜಾರಿಗೊಳಿಸಲು ಪ್ರಸ್ತಾವನೆ ಬಂದಿದೆಯೇ; ಬಂದಿದ್ದರೆ ಅದರ ಪ್ರಗತಿ ಏನು; | • ಅರ್ಹತಾ ಮನೆ ಮಂದಿ (PHH) ಹಾಗೂ ಆಧಾರ್ ಕಾರ್ಡ್ ಹೊಂದಿರುವ 70 ವರ್ಷ ಮೇಲ್ಪಟ್ಟ ರಾಜ್ಯದ ಎಲ್ಲಾ ಹಿರಿಯ ನಾಗರೀಕರನ್ನು ಒಳಗೊಂಡಂತೆ ರಾಜ್ಯದ ಎಲ್ಲಾ ನಿವಾಸಿಗಳು ಸದರಿ ಯೋಜನೆಯಡಿ ನೊಂದಾಯಿತ ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ ವಾರ್ಷಿಕ ರೂ.5.00 ಲಕ್ಷಗಳವರೆಗೆ ನಗದು ರಹಿತ ಚಿಕಿತ್ಸೆ ಪಡೆಯುವ ಸೌಲಭ್ಯ ಈಗಾಗಲೇ ಲಭ್ಯವಿದೆ.<br>• ಆಧಾರ್ ಕಾರ್ಡ್ ಜೊತೆಗೆ ಇತರೆ (NPHH) ಕಾರ್ಡ್ ಹೊಂದಿರುವ ವ್ಯಕ್ತಿಯು ಎಲ್ಲಾ ನೋಂದಾಯಿತ ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ ಸಹ-ಪಾವತಿ ಆಧಾರದ ಮೇಲೆ ಪ್ಯಾಕೇಜ್ ದರಗಳಲ್ಲಿ ಚಿಕಿತ್ಸೆಯನ್ನು ಪಡೆಯಬಹುದು. ಸರ್ಕಾರವು 30% ಭರಿಸುತ್ತದೆ ಮತ್ತು 70% ಫಲಾನುಭವಿಗಳು ಭರಿಸಬೇಕಾಗುತ್ತದೆ.<br>• ಯಾವುದೇ ಪಡಿತರ ಚೀಟಿ ಇಲ್ಲದೆ ಕೇವಲ ಆಧಾರ್ ಕಾರ್ಡ್ ಹೊಂದಿರುವ ವ್ಯಕ್ತಿಯು ಸಹ-ಪಾವತಿ ಆಧಾರದ ಮೇಲೆ ಪ್ಯಾಕೇಜ್ ದರಗಳಲ್ಲಿ ಚಿಕಿತ್ಸೆಯನ್ನು ಪಡೆಯಬಹುದು. ಸರ್ಕಾರವು 30% ಭರಿಸುತ್ತದೆ ಮತ್ತು 70% ಫಲಾನುಭವಿಗಳು ಭರಿಸಬೇಕಾಗುತ್ತದೆ.<br><br>ಆಯುಷ್ಮಾನ್ ಭಾರತ್ ಪ್ರಧಾನ ಮಂತ್ರಿ ಜನ ಆರೋಗ್ಯ ಯೋಜನೆ ಮುಖ್ಯಮಂತ್ರಿಗಳ ಆರೋಗ್ಯ ಕರ್ನಾಟಕ ಯೋಜನೆಯಡಿ 70 ವರ್ಷ |

ಮೇಲ್ಪಟ್ಟ ಫಲಾನುಭವಿಗಳಿಗೆ 2018 ರಿಂದ ಇಲ್ಲಿಯವರೆಗೆ ಈ ಕೆಳಕಂಡಂತೆ ಚಿಕಿತ್ಸೆಯನ್ನು ನೀಡಲಾಗಿದೆ.

| NPHH | | PHH | | Total Cases | Total Amount in Rs. |
|---|---|---|---|---|---|
| Cases | Amount in Rs. | Cases | Amount in Rs. | | |
| 54,753 | 21,26,57,968 | 12,49,749 | 1285,16,04,473 | 13,04,502 | 1306,42,62,441 |

<table>
<tr><td>ಇ)</td><td>ರಾಜ್ಯದಲ್ಲಿ ಈಗಾಗಲೇ ಅಸ್ತಿತ್ವದಲ್ಲಿರುವ ಆಯುಷ್ಮಾನ್ ಭಾರತ ಆರೋಗ್ಯ ಕರ್ನಾಟಕ ಯೋಜನೆಯೊಂದಿಗೆ ಕೇಂದ್ರದ ಯೋಜನೆಯನ್ನು ಸಮನ್ವಯಗೊಳಿಸುವಲ್ಲಿ ತಾಂತ್ರಿಕ ಅಥವಾ ಆರ್ಥಿಕ ಅಡಚಣೆಗಳಿವೆಯೇ; ಇದ್ದಲ್ಲಿ ವಿವರ ನೀಡುವುದು;</td><td rowspan="2">70 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ AB-PMJAY ಅಡಿಯಲ್ಲಿ ವಯೋವಂದನಾ ಯೋಜನೆಗೆ ಸಂಬಂಧಿಸಿದಂತೆ ಭಾರತ ಸರ್ಕಾರದ ಮಾರ್ಗಸೂಚಿಯನ್ವಯ ಅಸ್ತಿತ್ವದಲ್ಲಿರುವ ಗರಿಷ್ಠ 69,01,440 ಕುಟುಂಬಗಳ ಮಿತಿಗೊಳಪಟ್ಟು ಪ್ರತಿ ಕುಟುಂಬಕ್ಕೆ ಪ್ರತಿ ವರ್ಷಕ್ಕೆ ರೂ.75.70/- ಮತ್ತು ಪ್ರತಿ ಹೊಸ ಕುಟುಂಬಕ್ಕೆ ರೂ.1052/-ಗಳ ಅನುದಾನ ಮಾತ್ರ ಒದಗಿಸಲಾಗುತ್ತದೆ. ತತ್ಸಂಬಂಧ, AB-PMJAY CMs ArK ಯೋಜನೆ ಯಡಿಯಲ್ಲಿ ಅಸ್ತಿತ್ವದಲ್ಲಿರುವ ಮತ್ತು ಹೊಸ ಕುಟುಂಬಗಳನ್ನು ಗುರುತಿಸುವ ಅಗತ್ಯವಿದೆ. ಆದುದರಿಂದ, ಎಸ್.ಇ.ಸಿ.ಸಿ ಮಾನದಂಡಗಳನ್ನು ಅಳವಡಿಸಿ ಗುರುತಿಸಲಾದ 69,01,440 ಕುಟುಂಬಗಳ ಮಾಹಿತಿಯನ್ನು ರಾಷ್ಟ್ರೀಯ ಆರೋಗ್ಯ ಪ್ರಾಧಿಕಾರಕ್ಕೆ ಸಲ್ಲಿಸಲಾಗಿದ್ದು, ಬೆಳವಣಿಗೆಗಳನ್ನು ನಿರೀಕ್ಷಿಸಲಾಗಿದೆ.</td></tr>
<tr><td>ಈ)</td><td>ಯೋಜನೆಯನ್ನು ಜಾರಿಗೆ ತರುವಲ್ಲಿ ಆರ್ಥಿಕ ಭಾರ, ಹಂಚಿಕೆ ಅನುಪಾತ (Cost Sharing Pattern) ಡೇಟಾ ಸಂಯೋಜನೆ ಅಥವಾ ತಾಂತ್ರಿಕ ಸಮನ್ವಯ ಸಂಬಂಧಿತ ಅಡಚಣೆಗಳಿವೆಯೇ; ಇದ್ದಲ್ಲಿ ಅವುಗಳ ವಿವರಗಳೇನು;</td></tr>
<tr><td>ಉ)</td><td>ರಾಜ್ಯ ಸರ್ಕಾರವು 70 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಉಚಿತ ಮತ್ತು ನಗದು ರಹಿತ ಚಿಕಿತ್ಸೆಯನ್ನು ಖಚಿತಪಡಿಸಲು ಪ್ರತ್ಯೇಕ ರಾಜ್ಯ ಯೋಜನೆ ರೂಪಿಸುವ ಬಗ್ಗೆ ಚಿಂತನೆ ನಡೆಸಿದೆಯೇ; ರಾಜ್ಯದಲ್ಲಿನ ಖಾಸಗಿ ಆಸ್ಪತ್ರೆಗಳನ್ನು ಈ ಯೋಜನೆಗೆ ಹೆಚ್ಚಿನ ಸಂಖ್ಯೆಯಲ್ಲಿ</td><td>ರಾಜ್ಯ ಸರ್ಕಾರವು 70 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಉಚಿತ ಮತ್ತು ನಗದು ರಹಿತ ಚಿಕಿತ್ಸೆಯನ್ನು ಖಚಿತಪಡಿಸಲು ಪ್ರತ್ಯೇಕ ರಾಜ್ಯ ಯೋಜನೆ ರೂಪಿಸುವ ಚಿಂತನೆ ಇರುವುದಿಲ್ಲ. ಭಾರತ ಸರ್ಕಾರದ ವಯೋವಂದನ ಯೋಜನೆಯನ್ನು ಜಾರಿಗೊಳಿಸುವ ಪ್ರಕ್ರಿಯೆ ಚಾಲ್ತಿಯಲ್ಲಿದೆ. ಆದಾಗ್ಯೂ, ಆಯುಷ್ಮಾನ್ ಭಾರತ್ ಪ್ರಧಾನ ಮಂತ್ರಿ ಜನ ಆರೋಗ್ಯ ಯೋಜನೆ ಮುಖ್ಯಮಂತ್ರಿಗಳ ಆರೋಗ್ಯ ಕರ್ನಾಟಕ ಯೋಜನೆಯಡಿ ನೊಂದಾವಣೆಯಾಗಿರುವ ಆಸ್ಪತ್ರೆಗಳಲ್ಲಿ 70 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನ ಹಿರಿಯ ನಾಗರಿಕರು ವೈದ್ಯಕೀಯ ಚಿಕಿತ್ಸೆ/ಶಸ್ತ್ರ ಚಿಕಿತ್ಸೆ ಪಡೆಯಬಹುದಾಗಿದೆ.<br><br>ಸದರಿ ಯೋಜನೆಯಡಿ ಇಲ್ಲಿಯವರೆಗೆ ಒಟ್ಟು 2965 ಸರ್ಕಾರಿ ಆಸ್ಪತ್ರೆಗಳು ಮತ್ತು 541 ಖಾಸಗಿ ಆಸ್ಪತ್ರೆಗಳನ್ನು ನೋಂದಾವಣೆ ಮಾಡಿಕೊಳ್ಳಲಾಗಿದೆ.</td></tr>
</table>

| | | |
|---|---|---|
| | ಸೇರ್ಪಡೆಗೊಳಿಸಲು ಯೋಜನೆ ರೂಪಿಸಲಾಗಿದೆಯೇ; | ಸದರಿ ಯೋಜನೆಯಡಿಯಲ್ಲಿ ಚಿಕಿತ್ಸಾ ವಿಧಾನಗಳ ವೆಚ್ಚವನ್ನು ಪರಿಷ್ಕೃತಗೊಳಿಸಲು ಸಹಮತಿಸಲಾಗಿದ್ದು, ಆದರಿಂದಾಗಿ ಹೆಚ್ಚಿನ ಸಂಖ್ಯೆಯಲ್ಲಿ ಖಾಸಗಿ ಆಸ್ಪತ್ರೆಗಳು ನೊಂದಾವಣೆ ಆಗುವ ಸಾಧ್ಯತೆಯಿರುತ್ತದೆ. |
| **ಊ)** | ಹಿರಿಯ ನಾಗರಿಕರ ಆರೋಗ್ಯ ಹಕ್ಕನ್ನು ಸಂವಿಧಾನದ ಕಲಂ 21ರ ಅಡಿಯಲ್ಲಿ ಜೀವಿಸುವ ಹಕ್ಕಿನ ಅಂಗವಾಗಿ ಪರಿಗಣಿಸಿ, ರಾಜ್ಯ ಸರ್ಕಾರವು ತುರ್ತು ಕ್ರಮವಾಗಿ ಕೇಂದ್ರ ಯೋಜನೆಯನ್ನು ಸಂಪೂರ್ಣವಾಗಿ ಜಾರಿಗೆ ತರುವ ನಿರ್ಧಾರ ಕೈಗೊಳ್ಳುವುದೇ? | ಆಯುಷ್ಮಾನ್ ಭಾರತ್ ಪ್ರಧಾನ ಮಂತ್ರಿ ಜನ ಆರೋಗ್ಯ ಯೋಜನೆ ಮುಖ್ಯಮಂತ್ರಿಗಳ ಆರೋಗ್ಯ ಕರ್ನಾಟಕ ಯೋಜನೆಯಡಿ ಪ್ರತ್ಯೇಕವಾಗಿ ಹಿರಿಯ ನಾಗರಿಕರ ಯೋಜನೆಯನ್ನು ಅನುಷ್ಠಾನಗೊಳಿಸಲು ಆದ್ಯತೆ ಮೇಲೆ ಕ್ರಮ ಕೈಗೊಳ್ಳಲಾಗುತ್ತಿದೆ. |

**ಆಕುಕ 41ಎಸ್‌ಬಿವಿ 2026**

**(ದಿನೇಶ್ ಗುಂಡೂರಾವ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು